**MVC: 890/2023**
**(C/w 888/2023)**
**P.W-4**

## ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ

ದಿನಾಂಕಃ 18.03.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

### ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ

ನಾನು ದಿನಾಂಕ 18.03.2026 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 24 ಎಂದು, ಡಿಸ್ ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 25 ಎಂದು, ಮೆಡಿಕಲ್ ಬಿಲ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 26 ಎಂದು, ಅಂಗನ್ಯೂನತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 27 ಎಂದು ಗುರುತಿಸಲಾಯಿತು.

### ಪಾಟೀ ಸವಾಲು 3 ನೇ ಎದುರುದಾರರ ಪರ ವಕೀಲರಿಂದ

ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಮಾಡಿರುವುದಿಲ್ಲ. ನನಗೆ ಉಂಟಾದ ಗಾಯಗಳನ್ನು ಎಕ್ಸ್-ರೇ ತೆಗೆಯಲಾಗಿದೆ ಆದರೆ ಎಕ್ಸ್-ರೇ ಹಾಜರುಪಡಿಸಿಲ್ಲ ಎಂದರೆ ಸರಿ. ನನಗೆ ಯಾವುದೇ ತೀವ್ರ ಸ್ವರೂಪದ ಗಾಯಗಳು ಆಗಿಲ್ಲ ಹಾಗಾಗಿ ನಾನು ಸುಳ್ಳು ಅಂಗನ್ಯೂನತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ನಾನು ವ್ಯವಸಾಯ ಮಾಡುತ್ತೇನೆ ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ಪಹಣಿ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನಾನು ವರ್ಷಕ್ಕೆ ರೂ. 3 ಲಕ್ಷ ಹಣ ವ್ಯವಸಾಯದಿಂದ ದುಡಿಯುತ್ತೇನೆ ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ. ನಾವು ಸದರಿ ವಾಹನದಲ್ಲಿ ಅನಧಿಕೃತ ಪ್ರಯಾಣಿಕರಾಗಿ ಹೋಗುತ್ತಿದ್ದೆವು ಎಂದರೆ ಸರಿಯಲ್ಲ. 2 ನೇ ಎದುರುದಾರ ವಿಮಾ ಷರತ್ತುಗಳನ್ನು ಉಲ್ಲಂಘನೆ

ಮಾಡಿದ್ದರಿಂದ 3 ನೇ ಎದುರುದಾರರು ನಮಗೆ ಯಾವುದೇ ವಿಮಾ ಪರಿಹಾರ ಕೊಡಲು ಬಾದ್ಯಸ್ಥರು ಅಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರನ ತಪ್ಪಿನಿಂದ ಯಾವುದೇ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಸುಳ್ಳು ದಾಖಲೆಗಳನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**

**MVC: 889/2023**
**(C/w 888/2023)**
**P.W-3**

**<u>ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ</u>**

ದಿನಾಂಕಃ 18.03.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ</u>**

ನಾನು ದಿನಾಂಕ 18.03.2026 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 20 ಎಂದು, ಡಿಸ್ ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 21 ಎಂದು, ಮೆಡಿಕಲ್ ಬಿಲ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 22 ಎಂದು,ಅಂಗನ್ಯೂನತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 23 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು 3 ನೇ ಎದುರುದಾರರ ಪರ ವಕೀಲರಿಂದ</u>**

ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಮಾಡಿರುವುದಿಲ್ಲ. ನನಗೆ ಉಂಟಾದ ಗಾಯಗಳನ್ನು ಎಕ್ಸ್-ರೇ ತೆಗೆಯಲಾಗಿದೆ ಆದರೆ ಎಕ್ಸ್-ರೇ ಹಾಜರುಪಡಿಸಿಲ್ಲ ಎಂದರೆ ಸರಿ. ನನಗೆ ಯಾವುದೇ ತೀವ್ರ ಸ್ವರೂಪದ ಗಾಯಗಳು ಆಗಿಲ್ಲ ಹಾಗಾಗಿ ನಾನು ಸುಳ್ಳು ಅಂಗನ್ಯೂನತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ನಾನು ವ್ಯವಸಾಯ ಮಾಡುತ್ತೇನೆ ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ಪಹಣಿ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನಾನು ವರ್ಷಕ್ಕೆ ರೂ. 3 ಲಕ್ಷ ಹಣ ವ್ಯವಸಾಯದಿಂದ ದುಡಿಯುತ್ತೇನೆ ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ. ನಾವು ಸದರಿ ವಾಹನದಲ್ಲಿ ಅನಧಿಕೃತ ಪ್ರಯಾಣಿಕರಾಗಿ ಹೋಗುತ್ತಿದ್ದೆವು ಎಂದರೆ ಸರಿಯಲ್ಲ. 2 ನೇ ಎದುರುದಾರ ವಿಮಾ ಷರತ್ತುಗಳನ್ನು ಉಲ್ಲಂಘನೆ

ಮಾಡಿದ್ದರಿಂದ 3 ನೇ ಎದುರುದಾರರು ನಮಗೆ ಯಾವುದೇ ವಿಮಾ ಪರಿಹಾರ ಕೊಡಲು ಬಾದ್ಯಸ್ಥರು ಅಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರನ ತಪ್ಪಿನಿಂದ ಯಾವುದೇ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಸುಳ್ಳು ದಾಖಲೆಗಳನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**

**MVC: 887/2023**
**(C/w 888/2023)**
**P.W-2**

## ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ

ದಿನಾಂಕಃ 18.03.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

### ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ

ನಾನು ದಿನಾಂಕ 18.03.2026 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 16 ಎಂದು, ಡಿಸ್ ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 17 ಎಂದು, ಮೆಡಿಕಲ್ ಬಿಲ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 18 ಎಂದು, ಅಂಗನ್ಯೂನತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 19 ಎಂದು ಗುರುತಿಸಲಾಯಿತು.

### ಪಾಟೀ ಸವಾಲು 3 ನೇ ಎದುರುದಾರರ ಪರ ವಕೀಲರಿಂದ

ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಮಾಡಿರುವುದಿಲ್ಲ. ನನಗೆ ಬೆನ್ನಮೂಳೆ, ಎಡತೋಳು, ರಿಪ್ಸ್ ಮುರಿತವಾಗಿತ್ತು ಎಂಬುದಕ್ಕೆ ಸಂಬಂಧಿಸಿದಂತೆ ಎಕ್ಸ್-ರೇ ಹಾಜರುಪಡಿಸಿಲ್ಲ ಎಂದರೆ ಸರಿ. ನನಗೆ ಯಾವುದೇ ತೀವ್ರ ಸ್ವರೂಪದ ಗಾಯಗಳು ಆಗಿಲ್ಲ ಹಾಗಾಗಿ ನಾನು ಸುಳ್ಳು ಅಂಗನ್ಯೂನತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ನಾನು ದಿನಕ್ಕೆ ರೂ. 900/- ಕೂಲಿ ಪಡೆಯುತ್ತಿದ್ದೆ ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿ. ನಾವು ಸದರಿ ವಾಹನದಲ್ಲಿ ಅನಧಿಕೃತ ಪ್ರಯಾಣಿಕರಾಗಿ ಹೋಗುತ್ತಿದ್ದೆವು ಎಂದರೆ ಸರಿಯಲ್ಲ. 2 ನೇ ಎದುರುದಾರ ವಿಮಾ ಷರತ್ತುಗಳನ್ನು ಉಲ್ಲಂಘನೆ ಮಾಡಿದ್ದರಿಂದ 3 ನೇ ಎದುರುದಾರರು ನಮಗೆ ಯಾವುದೇ ವಿಮಾ ಪರಿಹಾರ ಕೊಡಲು ಬಾದ್ಯಸ್ಥರು ಅಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರನ ತಪ್ಪಿನಿಂದ ಯಾವುದೇ

ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಸುಳ್ಳು ದಾಖಲೆಗಳನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**

**MVC: 888/2023**
**P.W-1**

**ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ**

ದಿನಾಂಕಃ 18.03.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ**

ನಾನು ದಿನಾಂಕ 18.03.2026 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಪ್ರ.ವ.ವ ದಾಖಲೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 1 ಎಂದು, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 2 ಎಂದು, ಕೃತ್ಯಸ್ಥಳದಲ್ಲಿ ಜಪ್ತು ಪಂಚನಾಮೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 3 ಎಂದು, ಐ.ಎಂ.ವಿ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 4 ಎಂದು, ಗಾಯದ ಪ್ರಮಾಣ ಪತ್ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 5 ಎಂದು, ಚಾರ್ಜ್ ಶೀಟ್ ನಮೂನೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 6 ಎಂದು, ಡಿಸ್ ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 7 ಎಂದು, ಮೆಡಿಕಲ್ ಬಿಲ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 8 ಎಂದು, ಅಂಗನ್ಯೂನತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 9 ಎಂದು, ಒಟ್ಟು 5 ಎಕ್ಸ್ ರೇ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ- 10 ರಿಂದ 14 ಎಂದು, ನನ್ನ ಆಧಾರ್ ಕಾರ್ಡ್ ನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 15 ಎಂದು ಗುರುತಿಸಲಾಯಿತು.

**ಪಾಟೀ ಸವಾಲು 3 ನೇ ಎದುರುದಾರರ ಪರ ವಕೀಲರಿಂದ**

ಅಪಘಾತವಾದ ಕಾಲಕ್ಕೆ ಓಮಿನಿ ವಾಹನದಲ್ಲಿ ನಾವು ಮೊಳಕಾಲ್ಮುರು ನಿಂದ ಹುರುಳಿಹಾಳ್ ಗ್ರಾಮಕ್ಕೆ ಹೋಗುತ್ತಿದ್ದೆವು. ಒಟ್ಟು 4 ಜನ ಸದರಿ ವಾಹನದಲ್ಲಿ ಹೋಗುತ್ತಿದ್ದೆವು. ಸದರಿ ಓಮಿನಿ ವಾಹನದ ಮಾಲೀಕರು ನಮ್ಮ ಸಂಬಂಧಿಕರು ಇರುತ್ತಾರೆ. ಸದರಿ ಓಮಿನಿ

ವಾಹನವು ಮೀನಕೆರೆ ಪಕ್ಕದ ರಸ್ತೆಯಲ್ಲಿ ಪಲ್ಟಿಯಾಗಿರುತ್ತದೆ. ಆ ಕಾಲಕ್ಕೆ ನನ್ನ ಎಡಗಾಲು ಮುರಿದಿತ್ತು. ಅಪಘಾತವಾದ ನಂತರ ಮೊಳಕಾಲ್ಮುರು ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದಿರುತ್ತೇವೆ. ಅಲ್ಲಿಂದ ಬಳ್ಳಾರಿ ವಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇವೆ. ಅಲ್ಲಿ ಒಂದು ತಿಂಗಳ ಕಾಲ ಚಿಕಿತ್ಸೆ ಪಡೆದಿರುತ್ತೇನೆ. ಸದರಿ ಆಸ್ಪತ್ರೆಯಲ್ಲಿ ಉಚಿತವಾಗಿ ಚಿಕಿತ್ಸೆ ನೀಡುತ್ತಾರೆ ಎಂದರೆ ಸರಿಯಲ್ಲ. ಆ ನಂತರ ಅಲ್ಲಿಂದ ದಾವಣಗೆರೆಯ ನೈಪುಣ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇನೆ. ಅಲ್ಲಿ ಒಂದು ತಿಂಗಳ ಕಾಲ ಚಿಕಿತ್ಸೆ ಪಡೆದಿರುತ್ತೇನೆ. ಸದರಿ ಆಸ್ಪತ್ರೆಯಲ್ಲಿ 5 ದಿನ ಚಿಕಿತ್ಸೆ ಪಡೆದಿರುತ್ತೇನೆ ಆದರೂ ಒಂದು ತಿಂಗಳು ಚಿಕಿತ್ಸೆ ಪಡೆದಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರಕ್ಕಾಗಿ ನಾನು ಅಂಗನ್ಯೂನತೆ ಪ್ರಮಾಣ ಪತ್ರ ಪಡೆದು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಅಪಘಾತವಾದ 2 ದಿನಗಳ ನಂತರ ಪೊಲೀಸರಿಗೆ ನಾನೇ ದೂರು ಕೊಟ್ಟಿರುತ್ತೇನೆ.

ನಾನು ವ್ಯವಸಾಯ ಮಾಡುತ್ತೇನೆ ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ಪಹಣಿ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನಾನು ವರ್ಷಕ್ಕೆ ರೂ. 3 ಲಕ್ಷ ಹಣ ವ್ಯವಸಾಯದಿಂದ ದುಡಿಯುತ್ತೇನೆ ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ. 2 ನೇ ಎದುರುದಾರ ವಿಮಾ ಷರತ್ತುಗಳನ್ನು ಉಲ್ಲಂಘನೆ ಮಾಡಿದ್ದರಿಂದ 3 ನೇ ಎದುರುದಾರರು ನಮಗೆ ಯಾವುದೇ ವಿಮಾ ಪರಿಹಾರ ಕೊಡಲು ಬಾದ್ಯಸ್ಥರು ಅಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರನ ತಪ್ಪಿನಿಂದ ಯಾವುದೇ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಸುಳ್ಳು ದಾಖಲೆಗಳನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**